**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಎ ತಿಪ್ಪೇಸ್ವಾಮಿ ಇವರು ನಿಯಮ 72 ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:-**

**ವಿಷಯ:-**ರಾಜ್ಯದ ಮಾನ್ಯ ಮುಖ್ಯಮಂತ್ರಿಗಳು ಅನುಮೋದಿಸಿದಂತೆ ಹಾಗೂ ಆರ್ಥಿಕ ಇಲಾಖೆಯ ಸಹಮತಿಯಂತೆ ರಾಮನಗರ ಮತ್ತು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳ ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯದ ಗೌರವಾನ್ವಿತ ಮಾನ್ಯ ಮಾಜಿ ಮುಖ್ಯಮಂತ್ರಿಗಳಾದ ದಿ॥ ಕೆಂಗಲ್ ಹನುಮಂತಯ್ಯ ರವರ ಸಮಾಧಿ ಸ್ಥಳಕ್ಕೆ ಹೊಂದಿಕೊಂಡಿರುವ ಕೆಂಗಲ್ ಧಾರ್ಮಿಕ ಕ್ಷೇತ್ರದ ಅಭಿವೃದ್ಧಿ ಮತ್ತು ಮೂಲಭೂತ ಸೌಕರ್ಯಗಳ ಕಾಮಗಾರಿಗಳು ಹಾಗೂ ರಾಮನಗರದ ಪ್ರಸಿದ್ಧ ಧಾರ್ಮಿಕ ಸ್ಥಳವಾದ ದಕ್ಷಿಣ ಅಯೋಧ್ಯೆ ಎಂದು ಹೆಸರುವಾಸಿಯಾಗಿರುವ ಶ್ರೀ ರಾಮದೇವರ ಬೆಟ್ಟವು ಪುರಾಣ ಪ್ರಸಿದ್ಧವಾಗಿದ್ದು, ಶ್ರೀರಾಮದೇವರು ವನವಾಸದ ಕಾಲದಲ್ಲಿ ವಿಶ್ರಾಂತಿಗೆಂದು ಇಲ್ಲಿಗೆ ಬಂದು ನೆಲೆಸಿದ್ದರು ಎಂದು ಐತಿಹ್ಯವಿದ್ದು, ಈ ಕ್ಷೇತ್ರಗಳ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಆರ್ಥಿಕ ಇಲಾಖೆಯಿಂದ ಪ್ರವಾಸೋದ್ಯಮ ಇಲಾಖೆಗೆ ವಿಶೇಷ ಅನುದಾನ ಬಿಡುಗಡೆ ಮಾಡದೇ ಇರುವುದರಿಂದ ಕಾಮಗಾರಿಗಳು ಕುಂಠಿತಗೊಂಡಿರುವ ಬಗ್ಗೆ.

**ಉತ್ತರ:-** ರಾಮನಗರ ಮತ್ತು ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಪ್ರವಾಸೋದ್ಯಮ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ತಲಾ ರೂ. 10.00 ಕೋಟಿ ಯಂತೆ ಒಟ್ಟು ರೂ. 20.00 ಕೋಟಿಗಳ ವಿಶೇಷ ಅನುದಾನವನ್ನು ಮಂಜೂರು ಮಾಡಲು ದಿನಾಂಕ: 14.07.2022 ರ ಆರ್ಥಿಕ ಇಲಾಖೆಯ ಹಿಂಬರಹದಲ್ಲಿ ಸಹಮತಿ ನೀಡಲಾಗಿತ್ತು. ನಂತರದಲ್ಲಿ ಪ್ರವಾಸೋದ್ಯಮ ಇಲಾಖೆಯ ಪ್ರಸ್ತಾವನೆಯನ್ನು ಅನುಸರಿಸಿ, ಅದರಲ್ಲಿನ ಕೋರಿಕೆಯ ಮೇರೆಗೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸೂಕ್ತ ಹಿಂಬರಹಗಳನ್ನು ಆಡಳಿತ ಇಲಾಖೆಗೆ ನೀಡಲಾಗಿತ್ತು.

2022-23ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ: 5452-01-101-0-05-132 ರಡಿ ಮತ್ತು ಲೆಕ್ಕ ಶೀರ್ಷಿಕೆ: 5452-01-800-0-14-132 ರಡಿ ನಿಗದಿಯಾಗಿದ್ದ ಅನುದಾನವು ಪೂರ್ಣವಾಗಿ ಖರ್ಚಾಗದೇ ಲಭ್ಯವಿದ್ದ ಕಾರಣ ರಾಮನಗರ ಮತ್ತು ಚನ್ನಪಟ್ಟಣ ವಿಧಾನಸಭಾ ಕೇತ್ರದ ವ್ಯಾಪ್ತಿಯಲ್ಲಿ ವಿವಿಧ ಪ್ರವಾಸೋದ್ಯಮ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.20.00 ಕೋಟಿಗಳ ವಿಶೇಷ ಅನುದಾನವನ್ನು ಸದರಿ ಲೆ.ಶೀ ಯಡಿ ಲಭ್ಯವಿರುವ ಅನುದಾನದಿಂದ ಬಿಡುಗಡೆ ಮಾಡಿ ಕಾಮಗಾರಿಗಳನ್ನು ಕೈಗೊಳ್ಳುವಂತೆ ದಿನಾಂಕ:19.12.2022ರ ಅನಧಿಕೃತ ಟಿಪ್ಪಣಿಯಲ್ಲಿ ಪ್ರವಾಸೋದ್ಯಮ ಇಲಾಖೆಗೆ ತಿಳಿಸಲಾಗಿತ್ತು.

ಆರ್ಥಿಕ ಇಲಾಖೆಯಿಂದ ಹೊರಡಿಸುವ ಹಿಂಬರಹ / ಟಿಪ್ಪಣಿಗಳಲ್ಲಿ ತಿಳಿಸಿರುವ ಮೊತ್ತಕ್ಕೆ ಎದುರಾಗಿ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಮಾನ್ಯ ಶಾಸಕರುಗಳಿಂದ ಪಡೆದು ಸೂಕ್ತ ಲೆ.ಶೀ ಗಳಡಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಕಾಮಗಾರಿಗಳನ್ನು ಆದ್ಯತೆ ಮೇಲೆ ಅನುಷ್ಠಾನಗೊಳಿಸಿ ನಂತರ ಈ ಕಾಮಗಾರಿಗಳ ಬಿಲ್ಲುಗಳು ಸೃಜನೆಯಾದ ಮೊತ್ತಕ್ಕೆ ಅನುಸಾರವಾಗಿ ಅನುದಾನದ ಲಭ್ಯತೆ ಇಲ್ಲವಾದಲ್ಲಿ ಹೆಚ್ಚುವರಿ ಅನುದಾನ ಒದಗಿಸುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಇಲಾಖೆಗಳು ಸಲ್ಲಿಸಿದಾಗ ಯಾವುದೇ ತಾರತಮ್ಯವಿಲ್ಲದೆ ಆರ್ಥಿಕ ಸ್ಥಿತಿ-ಗತಿಯನ್ನು ಅವಲಂಭಿಸಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತದೆ.

ಸಂಖ್ಯೆ:ಆಇ 266 ವೆಚ್ಚ-7/2024.

(ಸಿದ್ದರಾಮಯ್ಯ)
ಮುಖ್ಯಮಂತ್ರಿ